# ಕನ್ನಡ ಪೋಸ್ಟ್

ಇದು ಸುದ್ದಿ ವಿಳಾಸ

ಸಂಪಾದಕ : ಮಂಜು ಬನವಾಸೆ

KANNADA POST

ಕನ್ನಡ ದಿನ ಪತ್ರಿಕೆ Kannada Daily

ಹಾಸನ E-mail : kannadapostnews@gmail.com / ಕನ್ನಡ post Price: ₹1

Vol.No.01 | Issue. 124 | Pages. 2 | Date: 16-03-2025, SUNDAY RNI NO: KARKAN/2024/89601

ಸಂಪುಟ : 01 - ಸಂಚಿಕೆ : 124 - ಪುಟಗಳು : 2 - 16 ಮಾರ್ಚ್ 2025 ಭಾನುವಾರ Ph: 8762954248 ದರ : ₹1


**ಉಪಟಳ ನೀಡುತ್ತಿರುವ 3 ಪುಂಡಾನೆ ಗುರುತು | ಸೆರೆ ಹಿಡಿಯಲು ಅರಣ್ಯ ಸಚಿವ ಈಶ್ವರ್ ಖಂಡ್ರೆ ನಿರ್ದೇಶನ**

# ಡಿಸಿಎಫ್ ದರ್ಜೆ ಅಧಿಕಾರಿ ನಿಯೋಜನೆ



■ ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್

ಹಾಸನ: ಬೇಲೂರು ತಾಲ್ಲೂಕಿನ ಬಿಕ್ಕೋಡು, ಅರೇಹಳ್ಳಿ ಸುತ್ತಲು ಉಪಟಳ ನೀಡುತ್ತಿರುವ 3 ಪುಂಡಾನೆ ಗುರುತಿಸಿದ್ದು, ಸೆರೆ ಕಾರ್ಯಾಚರಣೆ ಪ್ರಾರಂಭಿಸಬೇಕು. ಆನೆಗಳ ಓಡಾಟ ಹೆಚ್ಚಿರುವ ಬೇಲೂರಿನಲ್ಲಿ ಉಪ ಅರಣ್ಯ ಸಂರಕ್ಷಣಾಧಿಕಾರಿ ದರ್ಜೆಯ ಅಧಿಕಾರಿಯನ್ನು ನಿಯೋಜಿಸಬೇಕು ಎಂದು ಅರಣ್ಯ ಸಚಿವ ಈಶ್ವರ್ ಖಂಡ್ರೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

ಬೇಲೂರು ತಾಲ್ಲೂಕು ಕೋಗೋಡು ಸಮೀಪದ ತೋಟದಲ್ಲಿ ಶುಕ್ರವಾರ ಮಹಿಳೆಯೊಬ್ಬರು ಆನೆ ದಾಳಿಯಿಂದ ಮೃತಪಟ್ಟ ಹಿನ್ನೆಲೆಯಲ್ಲಿ ಶನಿವಾರ ಬೆಂಗಳೂರಿನ ವಿಕಾಸಸೌಧದ ಕಚೇರಿಯಲ್ಲಿ ಅರಣ್ಯಾಧಿಕಾರಿಗಳೊಂದಿಗೆ ತುರ್ತು ಸಭೆಯಲ್ಲಿ ಮಾತನಾಡಿದ ಅವರು, ಆನೆಗಳ ಓಡಾಟ ಹೆಚ್ಚಿರುವ ಪ್ರದೇಶದಲ್ಲಿ ಆನೆ ಕಾರ್ಯಪಡೆ ಕಚೇರಿ ಸ್ಥಾಪಿಸಿ, ಉಪ ಅರಣ್ಯ ಸಂರಕ್ಷಣಾಧಿಕಾರಿ ದರ್ಜೆಯ ಅಧಿಕಾರಿಯನ್ನು ನಿಯೋಜಿಸಬೇಕು ಎಂದರು.

ಹಾಸನ ವಲಯಕ್ಕೆ 2 ಥರ್ಮಲ್ ಕ್ಯಾಮರಾ ಸಹಿತ ಡ್ರೋನ್ ಖರೀದಿಸಿ ರಾತ್ರಿಯ ವೇಳೆ ಕೂಡ ಆನೆಗಳ ಸಂಚಾರದ ಬಗ್ಗೆ ನಿಗಾ ಇಡಬೇಕು. ಸ್ಥಳೀಯರಿಗೆ ಸಕಾಲದಲ್ಲಿ ಮಾಹಿತಿ ನೀಡುವಲ್ಲಿ ವಿಳಂಬವಾಗಬಾರದು. ಆನೆಗಳ ಸಮಸ್ಯೆ ಹೆಚ್ಚಿರುವ ಪ್ರದೇಶದಲ್ಲಿ ತುರ್ತು ಸ್ಪಂದನೆಗಾಗಿ 2 ಹೆಚ್ಚುವರಿ ಜೀಪ್ ಮತ್ತು ಹೆಚ್ಚುವರಿ ಸಿಬ್ಬಂದಿ ನಿಯೋಜಿಸಿ, ಆನೆಗಳ ಸಂಚಾರದ ಮಾಹಿತಿ ಬಂದ ಕೂಡಲೇ ಸ್ಪಂದಿಸುವಂತೆ ಸೂಚಿಸಿದರು.

ಬೇಲೂರು ಭಾಗದ ಜನರಿಗೆ, ತೋಟದ ಕಾರ್ಮಿಕರಿಗೆ ಆನೆಗಳ ಸ್ವಭಾವ, ಆನೆ ಬಂದಾಗ ಏನೆಲ್ಲಾ ಮುಂಜಾಗರೂಕತಾ ಕ್ರಮ ವಹಿಸಬೇಕು, ಹೇಗೆ ನಡೆದುಕೊಳ್ಳಬೇಕು, ಸಂಜೆ ಮತ್ತು ಬೆಳಗಿನ ವೇಳೆ ಓಡಾಡುವಾಗ ಕೈಗೊಳ್ಳಬೇಕಾದ ಎಚ್ಚರಿಕೆ ಇತ್ಯಾದಿಗಳ ಬಗ್ಗೆ ಜಾಗೃತಿ ಮೂಡಿಸಲು ತೋಟದ ಮಾಲೀಕರ ಸಹಕಾರ ಪಡೆದು ಜಾಗೃತಿ ಮೂಡಿಸಲು ಮತ್ತು ಗ್ರಾಮ ಮಟ್ಟದಲ್ಲಿ ಸಾರ್ವಜನಿಕ ಸಭೆಗಳನ್ನು ನಡೆಸಲು ಆದೇಶಿಸಿದರು.



ವಾಕಿಟಾಕಿ ಕಲ್ಪಿಸಿ: ಆನೆ ಕಾರ್ಯಪಡೆ ಮತ್ತು ಎಡಿಸಿ ಹೊರಗುತ್ತಿಗೆ ಸಿಬ್ಬಂದಿಗೆ ವೇತನ, ಆನೆ ಕಾರ್ಯಪಡೆಯ ಸಿಬ್ಬಂದಿಗೆ ಆಹಾರ ಭತ್ಯೆ, ಸಮವಸ್ತ್ರ, ಶೂ, ಜಾಕೆಟ್ ಹಾಗು ವಿಮಾ ಸೌಲಭ್ಯ ನೀಡುತ್ತಿರುವ ಕುರಿತು ಖಾತ್ರಿ ಪಡಿಸಿಕೊಳ್ಳಬೇಕು. ಮೊಬೈಲ್ ಸಿಗ್ನಲ್ ದೊರಕದ ಕಡೆಗಳಲ್ಲಿ ಸಿಬ್ಬಂದಿಗೆ ವಾಕಿಟಾಕಿ ನೀಡುವಂತೆಯೂ ಹೇಳಿದರು.

ಸಭೆಯಲ್ಲಿ ಅಪರ ಮುಖ್ಯ ಕಾರ್ಯದರ್ಶಿ ಅಂಜುಂ ಫರ್ವೇಜ್, ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಮತ್ತು ಅರಣ್ಯ ಪಡೆ ಮುಖ್ಯಸ್ಥೆ ಮೀನಾಕ್ಷಿ ನೇಗಿ, ಮುಖ್ಯ ವನ್ಯಜೀವಿ ಪರಿಪಾಲಕ ಸುಭಾಷ್ ಮಾಲ್ಕಡೆ ಹಾಗೂ ಇತರರಿದ್ದರು.

## ಇಂದಿನಿಂದ ಸೆರೆ ಕಾರ್ಯಾಚರಣೆ

ಕಾಡಾನೆ ಉಪಟಳ ನಿಯಂತ್ರಣಕ್ಕೆ ಬೇಲೂರು, ಅರೇಹಳ್ಳಿ, ಬಿಕ್ಕೋಡು ಭಾಗದ ರೈತರು ಆಗ್ರಹಿಸಿ ಪ್ರತಿಭಟನೆ ನಡೆಸಿದ ಹಿನ್ನೆಲೆಯಲ್ಲಿ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿರುವ ಸರ್ಕಾರ 3 ಪುಂಡಾನೆ ಸೆರೆ ಕಾರ್ಯಾಚರಣೆಗೆ ಅನುಮತಿ ನೀಡಿದೆ. ದುಬಾರೆ, ಮತ್ತಿಗೋಡು ಶಿಬಿರದಿಂದ ಕಂಜನ್, ಕರ್ನಾಟಕ ಭೀಮ, ಏಕಲವ್ಯ, ಹರ್ಷ, ಮಹೇಂದ್ರ, ಪ್ರಶಾಂತ್, ಧನಂಜಯ ಸೇರಿ ಏಳು ಕಾಡಾನೆಗಳು ಬಿಕ್ಕೋಡು ಕ್ಯಾಂಪ್‌ಗೆ ಆಗಮಿಸಿವೆ. ಭಾನುವಾರದಿಂದ ಕಾರ್ಯಾಚರಣೆ ನಡೆಯಲಿದೆ.

## ಆಹಾರ ಅರಸಿ ಬಂದಿದ್ದ ಆನೆ ದಾರುಣ ಸಾವು

### ಕಂಬನಿ ಮಿಡಿದ ಶಾಸಕ ಎ. ಮಂಜು | ಆನೆ ಕಾರಿಡಾರ್ ನಿರ್ಮಾಣಕ್ಕೆ ಆಗ್ರಹ

■ ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್

ಅರಕಲಗೂಡು: ಆಹಾರ ಅರಸಿ ಗುಂಪಿನೊಂದಿಗೆ ಜಮೀನಿಗೆ ಲಗ್ಗೆಯಿಟ್ಟಿದ್ದ 25 ವರ್ಷದ ಗಂಡಾನೆಯೊಂದು ವಿದ್ಯುತ್ ಸ್ಪರ್ಶದಿಂದ ದಾರುಣ ಸಾವಿಗೀಡಾಗಿರುವ ಘಟನೆ ತಾಲ್ಲೂಕಿನ ನೆಲಬಳ್ಳಿ ಗ್ರಾಮದಲ್ಲಿ ಶನಿವಾರ ನಡೆದಿದೆ.

ವೆಂಕಟೇಗೌಡ ಎಂಬುವರ ಜಮೀನಿನಲ್ಲಿ ಆನೆ ಶವ ಪತ್ತೆಯಾಗಿದೆ. ರೈತರು ಬೆಳೆ ಸಂರಕ್ಷಣೆ ಮಾಡಲು ಅಳವಡಿಸಿಕೊಂಡಿರುವ ವಿದ್ಯುತ್ ತಂತಿ ಬೇಲಿಯನ್ನು ದಾಟುವ ವೇಳೆ ವಿದ್ಯುತ್ ಶಾರ್ಟ್ ಸರ್ಕ್ಯೂಟ್‌ನಿಂದ ಆನೆ ಪ್ರಾಣಬಿಟ್ಟಿದೆ.

ಶುಕ್ರವಾರ ರಾತ್ರಿ ಮರಿಯೊಂದಿಗೆ 2 ಆನೆಗಳು ನೆಲಬಳ್ಳಿ ಗ್ರಾಮದ ಜಮೀನಿನಲ್ಲಿ ಲಗ್ಗೆಯಿಟ್ಟು



ಬೆಳೆ ನಾಶಗೊಳಿಸಿದ್ದವು. ಅದೇ ಗ್ರಾಮದ ಪ್ರಕಾಶ್ ಎಂಬುವವರ ತೋಟದಲ್ಲಿ 80ಕ್ಕೂ ಅಧಿಕ ಅಡಿಕೆ ಗಿಡಗಳನ್ನು ಧ್ವಂಸಗೊಳಿಸಿವೆ. ಕಳೆದ ಮೂರ್ನಾಲ್ಕು ದಿನಗಳಿಂದ ಬೈಸೂರು ಅರಣ್ಯದಲ್ಲಿ ಬೀಡುಬಿಟ್ಟಿದ್ದ ಆನೆಗಳ ಗುಂಪಿನ ಗಂಡಾನೆ ಬೆಳಗಿನ ಜಾವ ಗೆಣಸು ಹೊಲದಲ್ಲಿ ಸಾವನ್ನಪ್ಪಿದೆ.

ಹಾಸನ ಪಶು ವೈದ್ಯಾಧಿಕಾರಿಗಳ ತಂಡ ಸ್ಥಳಕ್ಕೆ ಬಂದು ಆನೆಯ ಮರಣೋತ್ತರ ಪರೀಕ್ಷೆ ನಡೆಸಿದರು. ನೆಲಬಳ್ಳಿ ಸೇರಿ ಸುತ್ತಮುತ್ತಲ ಗ್ರಾಮಗಳ ಜನರು ಆನೆ ಮೃತದೇಹಕ್ಕೆ ನಮಿಸಿದರು. ಅಂತ್ಯಕ್ರಿಯೆ ನೆರವೇರಿಸಲಾಯಿತು.

ಕಂಬನಿ ಮಿಡಿದ ಶಾಸಕ: ಸ್ಥಳಕ್ಕೆ ಆಗಮಿಸಿದ ಶಾಸಕ ಎ.ಮಂಜು ಅವರು ಕಂಬನಿ ಮಿಡಿದರು. ರೈತರು ಹಾಗು ಆನೆಗಳ ನಡುವಿನ ಸಂಘರ್ಷ ಹಲವಾರು ವರ್ಷಗಳಿಂದ ನಡೆಯುತ್ತಲೇ ಇದೆ. ನಾನು ಮಂತ್ರಿಯಾಗಿದ್ದಾಗ ಈ ವ್ಯಾಪ್ತಿಯಲ್ಲಿ ಆನೆ ಕಾರಿಡಾರ್ ನಿರ್ಮಿಸಲು ಸರ್ಕಾರವನ್ನು ಒತ್ತಾಯಿಸಿದ್ದೆ. ಆದರೆ ಯಾವುದೇ ಸರ್ಕಾರಗಳು ಕಾಮಗಾರಿಗೆ ಮುಂದಾಗದ ಕಾರಣ ಅವಘಡಗಳು ಹೆಚ್ಚುತ್ತಿವೆ. ಸೋಮವಾರ ವಿಧಾನಸಭಾ ಕಲಾಪದಲ್ಲಿ ಆನೆ ಕಾಡಿಡಾರ್, ಬೆಳೆ ಪರಿಹಾರ ಕುರಿತು ಸರ್ಕಾರದ ಗಮನ ಸೆಳೆದು ರೈತರ ಪರವಾಗಿ ಧ್ವನಿ ಎತ್ತುತ್ತೇನೆ. ಆನೆ ಕಾರಿಡಾರ್ ನಿರ್ಮಾಣಕ್ಕೆ ಸರ್ಕಾರಕ್ಕೆ ಒತ್ತಾಯಿಸುತ್ತೇನೆ ಎಂದರು. ತಹಶೀಲ್ದಾರ್ ಸೌಮ್ಯ, ಅರಣ್ಯಾಧಿಕಾರಿಗಳಾದ ಯಶ್ಮಾ ಮಾಚಮ್ಮ, ಶಂಕರ್, ಕಂದಾಯ ಅಧಿಕಾರಿಗಳಾದ ಹರೀಶ್ ಇತರರು ಹಾಜರಿದ್ದರು.

## ಅರಣ್ಯ ಇಲಾಖೆ ಸಿಬ್ಬಂದಿಗೆ ಸವಲತ್ತು ದೊರೆಯಲಿ

■ ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್

ಸಕಲೇಶಪುರ: ಕಾಡಾನೆ ಹಾಗೂ ಮಾನವ ಸಂಘರ್ಷ ತಡೆಗಟ್ಟುವ ನಿಟ್ಟಿನಲ್ಲಿ ಪ್ರಾಣದ ಹಂಗು ತೊರೆದು ಕೆಲಸ ಮಾಡುವ ಅರಣ್ಯ ಇಲಾಖೆ ಹೊರಗುತ್ತಿಗೆ ನೌಕರರಿಗೆ ಸೂಕ್ತ ಸಂಬಳ ಹಾಗು ಭದ್ರತಾ ಸಲಕರಣೆಗಳು ಸಿಗಬೇಕು ಎಂದು ಶಾಸಕ ಸಿಮೆಂಟ್ ಮಂಜು ಹೇಳಿದರು.

ಪಟ್ಟಣದ ಅರಣ್ಯ ಇಲಾಖೆ ಆವರಣದಲ್ಲಿ ಶನಿವಾರ ಆರ್‌ಆರ್‌ಟಿ ಹಾಗೂ ಎಡಿಸಿ ಸಿಬ್ಬಂದಿಗೆ ಸೋಲಾರ್ ಲೈಟ್, ಶೂ, ಸಮವಸ್ತ್ರ, ಬೆಂಕಿ ನಂದಿಸುವ ಕೋಲು ಮತ್ತಿತರ ಸಾಮಗ್ರಿ ವಿತರಿಸಿ ಮಾತನಾಡಿ, ಸಕಲೇಶಪುರ, ಬೇಲೂರು, ಆಲೂರು ತಾಲ್ಲೂಕುಗಳಲ್ಲಿ ಅರಣ್ಯ ಪ್ರದೇಶ ವ್ಯಾಪಕವಾಗಿದೆ. ಕಾಡಾನೆ



ಹಾವಳಿಯಿಂದ ಸಾವು-ನೋವು ಸಂಭವಿಸುತ್ತಿವೆ. ಹಲವು ತಂತ್ರಜ್ಞಾನ ಅಳವಡಿಸಿಕೊಂಡಿದ್ದರೂ ಕಾಡಾನೆ ನಿಯಂತ್ರಣ ಸಾಧ್ಯವಾಗಿಲ್ಲ. ಅರಣ್ಯ ಇಲಾಖೆ ಕಾಡಾನೆಗಳನ್ನು ಹಿಡಿಯುವ ಬದಲು ರೈತರು ಕಡಿದ ಸೌದೆಗಳನ್ನು ವಶಪಡಿಸಿಕೊಳ್ಳಲು ಮುಂದಾಗುತ್ತಿರುವುದು ಸರಿಯಲ್ಲ. ಅದರಿಂದ ರೈತರು ತೋಟಗಳಲ್ಲಿ ಮರ ಬೆಳೆಸಲು ಭಯಪಡುತ್ತಿದ್ದಾರೆ. ಸಾಂಪ್ರದಾಯಿಕವಾಗಿ ವರ್ಷದಲ್ಲಿ ಮೂರು ತಿಂಗಳು ವ್ಯವಹಾರ ನಡೆಸುವ ಇಟ್ಟಿಗೆ ಉದ್ಯಮಕ್ಕೂ ತೊಂದರೆ ಉಂಟಾಗಿದೆ. ಇತ್ತೀಚೆಗೆ ಕಾಡಂಚಿನ ಪ್ರದೇಶಗಳಲ್ಲಿ ದಶಕಗಳಿಂದ ವಾಸಿಸುತ್ತಿರುವ ಪರಿಶಿಷ್ಟ ಜಾತಿ ಮತ್ತು ಪಂಗಡದ ಜನರಿಗೆ ತೊಂದರೆ ನೀಡಲಾಗುತ್ತಿದೆ ಅರಣ್ಯ ಇಲಾಖೆಯವರು ಕಾನೂನಿಗಿಂತ ಜೀವ ದೊಡ್ಡದು ಎಂಬುದನ್ನು ಮನಗಾಣಬೇಕು. ಸರ್ಕಾರ ಸ್ಪೆಷಲ್ ಎಕನಾಮಿಕ್ ಜೋನ್ ಮಾದರಿಯಲ್ಲಿ ಸ್ಪೆಷಲ್ ಎಲಿಫಂಟ್ ಜೋನ್ ಸ್ಥಾಪಿಸಬೇಕು ಎಂದು ಒತ್ತಾಯಿಸಿದರು.

ವಲಯ ಅರಣ್ಯಾಧಿಕಾರಿ ಹೇಮಂತ್ ಕುಮಾರ್ ಮಾತನಾಡಿ, ಅರಣ್ಯ ಇಲಾಖೆಗೆ ಸಿಬ್ಬಂದಿ ಕೊರತೆ ಕಾಡುತ್ತಿದೆ. ಇರುವ ನೌಕರರಿಗೆ ವಸತಿ ವ್ಯವಸ್ಥೆಯಿಲ್ಲ. ಈಗಿರುವ ವಲಯ ಅರಣ್ಯಾಧಿಕಾರಿ ಮನೆಯನ್ನು ಕಾಡಾನೆ ಕಾರ್ಯಪಡೆ ಕಚೇರಿಗೆ ನೀಡಲಾಗಿದ್ದು, ಅದನ್ನೂ ಸ್ಥಳಾಂತರಿಸಲಾಗಿದೆ. ಈ ಬಾರಿ ಅರಣ್ಯ ಬೆಂಕಿ ಪ್ರಕರಣಗಳನ್ನು ಕಡಿಮೆ ಮಾಡುವ ಗುರಿ ಹೊಂದಿದ್ದು, ಸುಮಾರು 66 ಕಿ.ಮೀ ಫೈರ್ ಲೈನ್ ನಿರ್ಮಿಸಲಾಗಿದೆ. ಅದರಿಂದ ಕಾಡಿನಲ್ಲಿ ಬೆಂಕಿ ಕಾಣಿಸಿಕೊಂಡಾಗ ತಕ್ಷಣವೇ ನಂದಿಸಲು ಸಾಧ್ಯವಾಗಲಿದೆ ಎಂದರು. ಕಾಡಂಚಿನ ಪರಿಶಿಷ್ಟ ಜಾತಿ ಮತ್ತು ಪಂಗಡದ ಜನರಿಗೆ ಉಚಿತ ಗ್ಯಾಸ್ ಸಿಲಿಂಡರ್ ವಿತರಿಸಲಾಯಿತು. ಯಸಳೂರು ವಲಯ ಅರಣ್ಯಾಧಿಕಾರಿ ಕೃಷ್ಣ, ಕಸಬಾ ಅರಣ್ಯಾಧಿಕಾರಿ ಮಹಾದೇವ್, ಆದಿವಾಸಿ ಮುಖಂಡ ನವೀನ್ ಸದಾ, ಡಿಆರ್‌ಒಗಳಾದ ದರ್ಶನ್, ಮಂಜುನಾಥ್, ಜಂಬರಡಿ ಲೋಹಿತ್, ರಾಜ್‌ಕುಮಾರ್, ವಿನಯ್, ಪುರಸಭೆ ಸದಸ್ಯ ಪ್ರದೀಪ್, ಲೋಕೇಶ್ ಮತ್ತಿತರರು ಹಾಜರಿದ್ದರು.

## ಸರ್ಕಾರಿ ಎಂಜಿನೀಯರಿಂಗ್ ಕಾಲೇಜು, ಪಾಲಿಟೆಕ್ನಿಕ್ ಶೀಘ್ರ ಆರಂಭ

■ ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್

ಅರಸೀಕೆರೆ: ವಿದ್ಯಾರ್ಥಿ ಹಾಗೂ ತಾಲ್ಲೂಕಿನ ಜನತೆಯ ದಶಕಗಳ ಅಪೇಕ್ಷೆಯಾಗಿದ್ದ ಸರ್ಕಾರಿ ಎಂಜಿನಿಯರಿಂಗ್ ಕಾಲೇಜು ಹಾಗೂ ಪಾಲಿಟೆಕ್ನಿಕ್ ನಿರ್ಮಾಣ ಕಾಮಗಾರಿ ಮುಕ್ತಾಯ ಹಂತದಲ್ಲಿದ್ದು ಮೇ ತಿಂಗಳಲ್ಲಿ ಸಿಎಂ ಸಿದ್ದರಾಮಯ್ಯ ಅವರು ಲೋಕಾರ್ಪಣೆ ಮಾಡಲಿದ್ದಾರೆ ಶಾಸಕ ಕೆ.ಎಂ. ಶಿವಲಿಂಗೇಗೌಡ ಹೇಳಿದರು.



ನಗರದ ಹೊರ ವಲಯದ ಜಾಜೂರು ಸಮೀಪ ನಿರ್ಮಾಣಗೊಳ್ಳುತ್ತಿರುವ ಪಾಲಿಟೆಕ್ನಿಕ್ ಬಳಿ 4 ಕೋಟಿ ರೂ. ವೆಚ್ಚದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ನಿರ್ಮಿಸುತ್ತಿರುವ ಹಾಸ್ಟೆಲ್ ಕಟ್ಟಡಕ್ಕೆ ಭೂಮಿಪೂಜೆ ನೆರವೇರಿಸಿ ಮಾತನಾಡಿದರು.

ಎರಡು ಪ್ರತಿಷ್ಠಿತ ಕಾಲೇಜುಗಳ ಉದ್ಘಾಟನೆಗಾಗಿ ಸಿದ್ಧತೆ ಮಾಡಿಕೊಳ್ಳಲಾಗುತ್ತಿದೆ. ಎಂಜಿನಿಯರಿಂಗ್ ಹಾಗೂ ಪಾಲಿಟೆಕ್ನಿಕ್ ಎರಡೂ ಕಾಲೇಜು ಮುಂದಿನ ಶೈಕ್ಷಣಿಕ ವರ್ಷದಿಂದಲೇ ಕಾರ್ಯಾರಂಭ ಮಾಡಲಿವೆ ಎಂದು ಹೇಳಿದರು.

ಬಡ ಹಾಗೂ ಮಧ್ಯಮ ವರ್ಗಗಳ ಪ್ರತಿಭಾವಂತ ವಿದ್ಯಾರ್ಥಿಗಳು ಒಂದೆಡೆ ಉಳಿದುಕೊಂಡು ವ್ಯಾಸಂಗ ಮಾಡಲು ಯಾವುದೇ ರೀತಿಯ ಅಡಚಣೆ ಆಗದಂತೆ ವಸತಿ ನಿಲಯಗಳನ್ನೂ ನಿರ್ಮಿಸಿಕೊಡಲಾಗುವುದು. ದೇಶಕ್ಕೆ ಸ್ವಾತಂತ್ರ್ಯ ಬಂದು 7 ದಶಕ ಕಳೆದಿದ್ದರೂ, ಎಂಜಿನಿಯರಿಂಗ್ ಮತ್ತು ಪಾಲಿಟೆಕ್ನಿಕ್‌ನಂತಹ ಉನ್ನತ ಶಿಕ್ಷಣ ವ್ಯಾಸಂಗ ಮಾಡಲು ತಾಲ್ಲೂಕಿನ ವಿದ್ಯಾರ್ಥಿಗಳು ಹಾಸನ ಅಥವಾ ತಿಪಟೂರು ಅವಲಂಬಿಸಬೇಕಿತ್ತು ಎಂದರು.

ಶಿಕ್ಷಣ ಕ್ಷೇತ್ರದ ಬಲವರ್ಧನೆಯಿಂದ ಮಾತ್ರ ಕ್ಷೇತ್ರದ ಅಭಿವೃದ್ಧಿಯಾಗಲಿದೆ, ಅಷ್ಟೇ ಅಲ್ಲದೆ ತಾಲೂಕಿನ ವಿದ್ಯಾರ್ಥಿಗಳ ಉಜ್ವಲ ಭವಿಷ್ಯಕ್ಕಾಗಿ ಶಿಕ್ಷಣ ಕ್ಷೇತ್ರದ ಜೊತೆಗೆ ಸರ್ವಾಂಗೀಣ ಅಭಿವೃದ್ಧಿಗೆ ಒತ್ತು ನೀಡಲಾಗಿದೆ ಎಂದು ಹೇಳಿದರು.

ಈಗಾಗಲೇ ಹೋಬಳಿವಾರು ನಿರ್ಮಾಣವಾಗಿರುವ ಮುರಾರ್ಜಿ ವಸತಿ ಶಾಲೆಗಳು ರಾಜ್ಯದಲ್ಲೇ ಮಾದರಿಯಾಗಿವೆ. ಇದೇ ರೀತಿ ಆದಷ್ಟು ಶೀಘ್ರವೇ ನರ್ಸಿಂಗ್ ಕಾಲೇಜನ್ನೂ ಮಂಜೂರು ಮಾಡಿಸಿಕೊಂಡು ಬರುವುದಾಗಿ ಘೋಷಣೆ ಮಾಡಿದರು.

ಕಾಂಗ್ರೆಸ್ ಮುಖಂಡರಾದ ಗೊಲ್ಲರಹಳ್ಳಿ ಹನುಮಪ್ಪ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಬಾಣಾವರ ಶ್ರೀನಿವಾಸ್, ಹರಪನಹಳ್ಳಿ ಜಯಣ್ಣ, ತಾಲ್ಲೂಕು ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಧರ್ಮಶೇಖರ್, ಉಪಾಧ್ಯಕ್ಷ ಜವನಪ್ಪ, ತಾಪಂ ಮಾಜಿ ಅಧ್ಯಕ್ಷೆ ಮಂಜುಳಾಬಾಯಿ, ಜಾಜೂರು ಗ್ರಾಪಂ ಅಧ್ಯಕ್ಷೆ ಲೀಲಾಬಾಯಿ ಚಂದ್ರನಾಯಕ ಮೊದಲಾದವರಿದ್ದರು.

## ಯುವಕರ ಹಾಳು ಮಾಡುತ್ತಿರುವ ಆನ್‌ಲೈನ್ ಗೇಮ್, ಮದ್ಯ

■ ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್

ಬೇಲೂರು: ಆನ್‌ಲೈನ್ ಗೇಮ್ ಹಾಗೂ ಚಿಲ್ಲರೆ ಅಂಗಡಿಗಳಲ್ಲಿ ಸಿಗುವ ಅಕ್ರಮ ಮದ್ಯ ಯುವ ಸಮುದಾಯವನ್ನು ಹಾಳು ಮಾಡುತ್ತಿದೆ ಎಂದು ಪುಷ್ಪಗಿರಿ ಮಹಾಸಂಸ್ಥಾನ ಮಠದ ಶ್ರೀ ಸೋಮಶೇಖರ ಸ್ವಾಮೀಜಿ ಹೇಳಿದರು.



ತಾಲ್ಲೂಕಿನ ಗಡಿರೇಖೆ ಭದ್ರಕಾಳಿ ಬನದ ಶ್ರೀ ವೀರಭದ್ರೇಶ್ವರ ಸ್ವಾಮಿ ಮತ್ತು ಶ್ರೀ ಭದ್ರಕಾಳಮ್ಮ 28ನೇ ಜಾತ್ರಾ ಮಹೋತ್ಸವ ಮತ್ತು ಧಾರ್ಮಿಕ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ,

ಮದ್ಯದಂಗಡಿಗಳಿಂದಲೇ ಸರ್ಕಾರ ನಡೆಸುವ ದುರ್ಗತಿ ಬಂದಿದೆ. ಯುವ ಜನಾಂಗ ದೇಶದ ಸಂಪತ್ತು ಅವರಿಗೆ ಸನ್ಮಾರ್ಗ ಮತ್ತು ಸಂಸ್ಕೃತಿ ಉಳಿಸುವ ಕಡೆ ಮಾರ್ಗದರ್ಶನ ನೀಡುವ ಅನಿವಾರ್ಯತೆಯಿದೆ. ಭದ್ರಕಾಳಿ ಬನಕ್ಕೆ ದಿ. ಬಿ. ಶಿವರುದ್ರಪ್ಪನವರು ನೀಡಿದ ಕಾಯಕಲ್ಪಕ್ಕೆ ಹಲ್ಲೇನಹಳ್ಳಿ ಸಿದ್ದರಾಜು ಮತ್ತು ಟ್ರಸ್ಟ್ ಅವಿರತವಾಗಿ ಕೆಲಸ ಮಾಡಿದ ಹಿನ್ನಲೆಯಲ್ಲಿ ಪ್ರಾಕೃತಿಕ ಭದ್ರಕಾಳಿ ಬನ ರಾಜ್ಯದಲ್ಲಿ ಖ್ಯಾತಿ ಪಡೆದಿದೆ ಎಂದರು.

ಪರಸ್ಪರ ಸಾಮರಸ್ಯದಿಂದ ಬಾಳುತ್ತಿರುವ ಹಳ್ಳಿಗಳಲ್ಲಿ ಚಿಲ್ಲರೆ ಅಂಗಡಿಗಳಲ್ಲಿ ಅಕ್ರಮ ಮದ್ಯ ಸಿಗುತ್ತಿದೆ. ಅದರಿಂದ ಭವಿಷ್ಯದಲ್ಲಿ ದೇಶವನ್ನು ಕಟ್ಟುವ ಯುವ ಸಮುದಾಯ ವ್ಯಸನಕ್ಕೆ ದಾಸರಾಗಿ ಅಮೂಲ್ಯ ಬದುಕನ್ನು ನಾಶ ಮಾಡಿಕೊಳ್ಳುತ್ತಿದ್ದಾರೆ. ಸರ್ಕಾರಗಳೇ ದುಶ್ಚಟಕ್ಕೆ ಬೆಂಬಲ ನೀಡಿದಂತಾಗುತ್ತಿದೆ. ಆದರ್ಶ ಸಮಾಜ ನಿರ್ಮಾಣವಾಗಬೇಕೆಂದರೆ ಅಕ್ರಮ ಮದ್ಯ ಮಾರಾಟಕ್ಕೆ ಕಡಿವಾಣ ಹಾಕಬೇಕು ಎಂದರು.

ಪುಷ್ಪಗಿರಿ ಮಹಾಸಂಸ್ಥಾನದ ಕಾರ್ಯದರ್ಶಿ ಗ್ರಾನೈಟ್ ರಾಜಶೇಖರ್ ಮಾತನಾಡಿ, ಅಧಿಕಾರ- ಹಣದ ಹಿಂದೆ ಬಿದ್ದಿರುವ ಮನುಷ್ಯ ಆರೋಗ್ಯವನ್ನು ನಿರ್ಲಕ್ಷಿಸುತ್ತಿದ್ದಾನೆ. ಜೊತೆಗೆ ಕೃಷಿಯಲ್ಲಿ ಸಾರ್ವಜನಿಕರ ಆಸಕ್ತಿಯು ಕಡಿಮೆಯಾಗುತ್ತಿದೆ. ಸಮಾಜ ಅಭಿವೃದ್ಧಿಯಾಗಬೇಕೆಂದರೆ ಕೃಷಿ ಬೆಳವಣಿಗೆ ಹೊಂದಬೇಕು ಎಂದರು.

ಭದ್ರಕಾಳಿ ಬನ ಟ್ರಸ್ಟ್ ಅಧ್ಯಕ್ಷ ಹಲ್ಲೇನಹಳ್ಳಿ ಸಿದ್ದರಾಜು ಮಾತನಾಡಿ, ಮೂರು ಬೆಟ್ಟಗಳ ನಡುವಿನ ಸುಂದರ ತಾಣ ಭದ್ರಕಾಳಿ ಬನ. ಕಲ್ಯಾಣ ಮಂಟಪ, ಪುರಾತನ ಕಲ್ಯಾಣಿ ಸ್ವಚ್ಛತೆ, ಸಮುದಾಯ ಭವನ, ಬಯಲು ರಂಗಮಂದಿರ, ಸುಸಜ್ಜಿತ ಶೌಚಾಲಯ ನಿರ್ಮಿಸಿ ಭಕ್ತರಿಗೆ ಅನುಕೂಲ ಕಲ್ಪಿಸಲಾಗಿದೆ ಎಂದರು. ಬಿಜೆಪಿ ಜಿಲ್ಲಾಧ್ಯಕ್ಷ ಸಿದ್ದೇಶ್ ನಾಗೇಂದ್ರ, ಬಿಜೆಪಿ ಮುಖಂಡರಾದ ಬಿ.ಹೆಚ್. ರೇಣುಕುಮಾರ್, ಗಂಗೂರು ಶಿವಕುಮಾರ್, ಗಾಳಿಹಳ್ಳಿ ಶಿವಣ್ಣ, ಜೆ.ಆರ್. ಹುಲಿಗೌಡ, ಹಳೇಬೀಡು ಕಾಂತರಾಜು, ದೊಡ್ಡಚನ್ನೇಗೌಡ, ಪಾಪಣ್ಣ, ಹೆಬ್ಬಾಳು ಹಾಲಪ್ಪ ಇತರರು ಹಾಜರಿದ್ದರು.

## ರೋಗಿಗಳೊಂದಿಗೆ ಸೌಜನ್ಯದಿಂದ ವರ್ತಿಸಿ: ಸೂರಜ್

■ ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್

ಚನ್ನರಾಯಪಟ್ಟಣ: ಚಿಕಿತ್ಸೆಗೆ ಬರುವ ರೋಗಿಗಳೊಂದಿಗೆ ವೈದ್ಯರು ಹಾಗೂ ಸಿಬ್ಬಂದಿ ಸೌಜನ್ಯದಿಂದ ವರ್ತಿಸಬೇಕು ಎಂದು ವಿಧಾನ ಪರಿಷತ್ ಸದಸ್ಯ ಡಾ. ಸೂರಜ್ ರೇವಣ್ಣ ಸಲಹೆ ನೀಡಿದರು.

ಪಟ್ಟಣದ ಸರ್ಕಾರಿ ಆಸ್ಪತ್ರೆಗೆ ಶನಿವಾರ ದಿಢೀರ್ ಭೇಟಿ ನೀಡಿದ ಅವರು ರೋಗಿಗಳ ಯೋಗಕ್ಷೇಮ ವಿಚಾರಿಸಿ ಮಾತನಾಡಿದರು.

ಆಸ್ಪತ್ರೆಯಲ್ಲಿ ಸ್ವಚ್ಛತೆಗೆ ಆದ್ಯತೆ ನೀಡಬೇಕು. ಪ್ರೀತಿ, ವಿಶ್ವಾಸದಿಂದ ರೋಗಿಗಳನ್ನು ಉಪಚರಿಸಿದರೆ ಅರ್ಧ ಕಾಯಿಲೆ ಗುಣವಾಗುತ್ತದೆ. ಈ ನಿಟ್ಟಿನಲ್ಲಿ ಎಲ್ಲಾ ಸಿಬ್ಬಂದಿ ಕಾರ್ಯೋನ್ಮುಖರಾಗಬೇಕು ಎಂದರು.



ತಾಲ್ಲೂಕು ಆಡಳಿತ ವೈದ್ಯಾಧಿಕಾರಿ ಡಾ. ವಿ. ಮಹೇಶ್ ಮಾತನಾಡಿ, ವಿಧಾನ ಪರಿಷತ್ ಸದಸ್ಯ ಸೂರಜ್ ರೇವಣ್ಣ ಅವರಿಗೆ ಚನ್ನರಾಯಪಟ್ಟಣದ ಸಾರ್ವಜನಿಕರ ಕುರಿತು ವಿಶೇಷ ಪ್ರೀತಿ ಇದೆ. ಆಸ್ಪತ್ರೆಗೆ ಸಂಬಂಧಿಸಿ ವಾರಕ್ಕೆ ಒಂದು ಬಾರಿಯಾದರೂ ನನಗೆ ಕರೆ ಮಾಡುತ್ತಾರೆ ಎಂದರು.

ಜೆಡಿಎಸ್ ಮುಖಂಡರಾದ ಸಿ.ಕೆ. ಸುರೇಶ್, ನವೀನ್, ಡಾ. ರವಿ, ಡಾ. ಪ್ರವೀಣ್, ಡಾ. ಪ್ರಶಾಂತ್, ಡಾ. ಸಿಂಧು, ಸಿಬ್ಬಂದಿ ಶೋಭಾಮಣಿ, ಪದ್ಮ, ಗುರುಮೂರ್ತಿ, ಪ್ರಮೋದ್, ಗಿರಿಜಾ ಇತರರಿದ್ದರು.

## ಈಜಲು ತೆರಳಿದ್ದ ವಿದ್ಯಾರ್ಥಿ ಜಲ ಸಮಾಧಿ

■ ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್

ಚನ್ನರಾಯಪಟ್ಟಣ: ತಾಲ್ಲೂಕಿನ ಎಂ. ದಾಸಾಪುರ ಗ್ರಾಮದ ಕಟ್ಟೆಗೆ ಶನಿವಾರ ಈಜಲು ಸ್ನೇಹಿತರೊಂದಿಗೆ ತೆರಳಿದ್ದ ವಿದ್ಯಾರ್ಥಿ ವಾಪಸ್ ಬರಲು ಸಾಧ್ಯವಾಗದೆ ಮೃತಪಟ್ಟಿದ್ದಾನೆ. ತಾಲ್ಲೂಕಿನ ಮರುವನಹಳ್ಳಿ ಗ್ರಾಮದ ಸೋಮಶೇಖರ್ ಹಾಗೂ ಮಣಿ ದಂಪತಿ ಪುತ್ರ ಕಿರಣ್ (14) ಮೃತ. ದಾಸಾಪುರದ ನಿರ್ಮಲ ವಿದ್ಯಾ ಶಾಲೆಯಲ್ಲಿ 9ನೇ ತರಗತಿ ಓದುತ್ತಿದ್ದ ವಿದ್ಯಾರ್ಥಿ ಸ್ನೇಹಿತರಾದ ಹೇಮಂತ್ ಹಾಗೂ ಹರ್ಷಿತ್ ಜೊತೆಗೆ ಈಜಲು ಊರ ಹೊರವಲಯದಲ್ಲಿರುವ ಕಟ್ಟೆಗೆ ತೆರಳಿದ್ದ. ಮೂವರಿಗೂ ಪರಿಪೂರ್ಣ ಈಜು ಬರುತ್ತಿರಲಿಲ್ಲ. ಕಟ್ಟೆ ಪಕ್ಕದಲ್ಲೇ ಆಟವಾಡುತ್ತಾ ಇದ್ದ ಎಲ್ಲರೂ ಗುಂಡಿಯ ಆಳ ತಿಳಿಯದೆ ಮುಂದಕ್ಕೆ ಸಾಗಿದ್ದಾರೆ. ನಂತರ ವಾಪಾಸ್ ಬರಲು ಸಾಧ್ಯವಾಗದೆ ಪರದಾಡಿದ್ದಾರೆ. ಹರ್ಷಿತ್, ಹೇಮಂತ್ ಕಷ್ಟಪಟ್ಟು ದಡ ತಲುಪಿದ್ದಾರೆ. ಕಿರಣ್ ಬರಲಾಗದೆ ನೀರಿನಲ್ಲಿ ಮುಳುಗಿ ಸಾವಿಗೀಡಾಗಿದ್ದಾನೆ. ಅಗ್ನಿ ಶಾಮಕ ಸಿಬ್ಬಂದಿ ಹಾಗೂ ಈಜು ತರಬೇತುದಾರರು ನಿರಂತರ ಕಾರ್ಯಾಚರಣೆ ಮೂಲಕ ರಾತ್ರಿ 7ರ ವೇಳೆಗೆ ಮೃತದೇಹ ಹೊರ ತೆಗೆದರು. ಶಾಲಾ ಆಡಳಿತ ಮಂಡಳಿ ವಿರುದ್ಧ ಪೋಷಕರು ಪ್ರತಿಭಟನೆ ನಡೆಸಿದರು. ನುಗ್ಗೇಹಳ್ಳಿ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ನಾಳೆ ಸ್ಪಂದನ ಯೋಜನೆ ಉದ್ಘಾಟನೆ

■ ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್

ಹಾಸನ: ನಗರದ ಸರ್ಕಾರಿ ಕಲಾ, ವಾಣಿಜ್ಯ ಮತ್ತು ಸ್ನಾತಕೋತ್ತರ ಕಾಲೇಜು ಸಭಾಂಗಣದಲ್ಲಿ ಮಾ. 17ರ ಸೋಮವಾರ ಬೆಳಿಗ್ಗೆ 10.30ಕ್ಕೆ ಸ್ಪಂದನ ಯೋಜನೆ ಉದ್ಘಾಟನಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಪರಿಪೂರ್ಣ ಚಾರಿಟಬಲ್ ಟ್ರಸ್ಟ್ ನ ಕಾರ್ಯದರ್ಶಿ ಡಾ.ಡಿ.ಜಿ. ಕೃಷ್ಣೇಗೌಡ ತಿಳಿಸಿದರು.



ಸುದ್ದಿಗೋಷ್ಠಿಯಲ್ಲಿ ಶನಿವಾರ ಮಾತನಾಡಿ, ಸರಕಾರಿ ಕಾಲೇಜು, ಜನಕಲ್ಯಾಣ ರಿಸರ್ಚ್ ಮತ್ತು ಚಾರಿಟಬಲ್ ಟ್ರಸ್ಟ್ ಹಾಗೂ ದಿ.ಡಾ.ಗುರುರಾಜ್ ಹೆಬ್ಬಾರ್ ಸ್ಥಾಪಿತ ಪರಿಪೂರ್ಣ ಚಾರಿಟಬಲ್ ಟ್ರಸ್ಟ್ ವತಿಯಿಂದ ಹಿಂದಿನ ಶೈಕ್ಷಣಿಕ ವರ್ಷದಲ್ಲಿ ಪೋಷಕರನ್ನು ಕಳೆದುಕೊಂಡು, ಆರ್ಥಿಕವಾಗಿ ಸಂಕಷ್ಟದಲ್ಲಿರುವ ಸರ್ಕಾರಿ ಪದವಿ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ನಗರದ ವಿದ್ಯಾರ್ಥಿ, ವಿದ್ಯಾರ್ಥಿನಿಯರಿಗೆ ಸಹಾಯ ಧನ ನೀಡುವ ಕಾರ್ಯಕ್ರಮವನ್ನು ಸರ್ಕಾರಿ ಕಲಾ ವಾಣಿಜ್ಯ ಮತ್ತು ಸ್ನಾತಕೋತ್ತರ ಕಾಲೇಜಿನಲ್ಲಿ ಆಯೋಜಿಸಲಾಗಿದೆ ಎಂದರು.

ಕಾರ್ಯಕ್ರಮವನ್ನು ಮತ್ತಷ್ಟು ವಿಸ್ತರಿಸುವ ದೃಷ್ಟಿಯಿಂದ ಸ್ಪಂದನ ಯೋಜನೆ ಉದ್ಘಾಟಿಸಲಾಗುತ್ತಿದೆ. ಕಾರ್ಯಕ್ರಮವನ್ನು ಹಾಸನ ವಿಧಾನಸಭಾ ಕ್ಷೇತ್ರದ ಶಾಸಕ ಹೆಚ್.ಪಿ. ಸ್ವರೂಪ್ ಪ್ರಕಾಶ್ ಉದ್ಘಾಟಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಕರ್ನಾಟಕ ಗಾಂಧಿ ಸ್ಮಾರಕ ನಿಧಿ, ಬೆಂಗಳೂರು ಇದರ ನಿರ್ದೇಶಕ ಪ್ರೊ.ಬಿ.ಜಿ. ಶಿವರಾಜು, ಹಾಸನ ಜಿಲ್ಲಾ ಒಕ್ಕಲಿಗರ ಸಂಘ ಅಧ್ಯಕ್ಷ ಜಿ.ಎಲ್. ಮುದ್ದೇಗೌಡ, ವಿದ್ಯಾಸೌಧ ಸಮೂಹ ಶಿಕ್ಷಣ ಸಂಸ್ಥೆಗಳ ಅಧ್ಯಕ್ಷ ಡಾ.ಮಂಜೇಗೌಡ ಹಾಗೂ ಸರ್ಕಾರಿ ಕಲಾ ವಾಣಿಜ್ಯ ಹಾಗೂ ಸರ್ಕಾರಿ ಕಲಾ ವಾಣಿಜ್ಯ ಹಾಗೂ ಸ್ನಾತಕೋತ್ತರ ಕಾಲೇಜಿನ ಪ್ರಾಂಶುಪಾಲ ಡಾ. ಎಂ.ಟಿ. ಇರ್ಷಾದ್ ಮೊದಲಾದವರು ಭಾಗವಹಿಸಲಿದ್ದಾರೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜನಕಲ್ಯಾಣ ರಿಸರ್ಚ್ ಅಂಡ್ ಚಾರಿಟಬಲ್ ಟ್ರಸ್ಟ್ ಅಧ್ಯಕ್ಷ ಬಿ.ವಿ. ಕರೀಗೌಡ, ವಹಿಸುವರು ಎಂದರು. ಪತ್ರಿಕಾಗೋಷ್ಠಿಯಲ್ಲಿ ಪರಿಪೂರ್ಣ ಚಾರಿಟ ಬಲ್ ಟ್ರಸ್ಟ್ ಅಧ್ಯಕ್ಷ ಹೆಚ್.ವಿ.ಲಕ್ಷ್ಮೀನಾರಾಯಣ್, ಉಪಾಧ್ಯಕ್ಷ ಅಮ್ಜದ್‌ಖಾನ್, ಖಜಾಂಚಿ ಮಹಾಲಕ್ಷ್ಮಿ, ಟ್ರಸ್ಟಿಗಳಾದ ಕೆ.ಟಿ. ಜಯಶ್ರೀ, ಜಿ.ಎನ್. ಹೇಮಲತಾ ಸುದ್ದಿಗೋಷ್ಠಿಯಲ್ಲಿ ಇದ್ದರು.

